159ನಲಿ
(87)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ-72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ:**

ಶತಮಾನದ ಹಿಂದೆ ಮಕ್ಕಳಿಗೆ ಶಿಕ್ಷಣ ನೀಡುವ ಕನಸು ಹೊತ್ತು ಹಿರಿಯರು ಸ್ಥಾಪಿಸಿದ್ದ ಈ ಶಾಲೆಗಳು ನಿರ್ವಹಣೆ ಕೊರತೆಯಿಂದ ಅಳಿವಿನಂಚಿಗೆ ತಲುಪಿವೆ. ಈ ಶಾಲೆಗಳ ಅಕ್ಕ-ಪಕ್ಕ ಖಾಸಗಿ ಆಂಗ್ಲ ಮಾಧ್ಯಮ ಶಾಲೆಗಳು ತಲೆ ಎತ್ತಿವೆ. ಶತಮಾನ ಕಂಡ ಶಾಲೆಗಳಿಗೆ ಐತಿಹಾಸಿಕ ಮಹತ್ವವಿದೆ. ಅವು ಅವಕಾಶ ವಂಚಿತ ಸಮುದಾಯಗಳಿಗೆ ಆಧುನಿಕ ಶಿಕ್ಷಣದ ಮೂಲಕ ಬಿಡುಗಡೆಯ ದಾರಿ ತೋರಿವೆ. ಅಂತಹ ಶಾಲೆಗಳು ಅಳಿವಿನಂಚಿಗೆ ಸರಿಯುವುದೆಂದರೆ ನಮ್ಮ ಪರಂಪರೆಯ ಆಶಯಕ್ಕೆ ಊನ ಬಂದಿದೆ ಎಂದರ್ಥ. ಜಾಗತೀಕರಣದ ವೇಗೋತ್ಕರ್ಷದಲ್ಲಿ ಅವು ಅಪ್ರಸ್ತುತವಾಗದಂತೆ ಉಳಿಸಿ ಬೆಳೆಸುವುದು ಪ್ರಜಾಸತ್ತಾತ್ಮಕ ಸರ್ಕಾರದ ಸಾಂವಿಧಾನಿಕ ಜವಾಬ್ದಾರಿ. ಈ ಶಾಲೆಗಳನ್ನು ಪುನಶ್ಚೇತನಗೊಳಿಸುವುದು ಸಂವಿಧಾನಕ್ಕೆ ಸಲ್ಲಿಸುವ ಗೌರವವೂ ಆಗಿದೆ.

ರಾಜ್ಯದಲ್ಲಿ 3139 ಶತಮಾನ ಕಂಡ ಸರ್ಕಾರಿ ಶಾಲೆಗಳಿದ್ದು, ಇದರಲ್ಲಿ ಬಹುತೇಕ ಶಾಲೆಗಳು ಹಳೆಯ ಕಟ್ಟಡಗಳನ್ನೇ ನೆಚ್ಚಿಕೊಂಡಿವೆ. ಮೂಲಸೌಕರ್ಯಗಳ ಕೊರತೆ ಮತ್ತು ಖಾಸಗಿ ಶಾಲೆಗಳ ಪೈಪೋಟಿಯ ನಡುವೆ ವಿದ್ಯಾರ್ಥಿಗಳನ್ನು ಆಕರ್ಷಿಸುವಲ್ಲಿ ಹಿಂದೆ ಬಿದ್ದಿವೆ. ಕೆಲವು ಕಡೆ ದುರಸ್ತಿ ಕಾಮಗಾರಿಗಳಾಗಿದ್ದರೂ, ಸಮಸ್ಯೆಗಳಿಂದ ಪೂರ್ಣ ಮುಕ್ತವಾಗಿಲ್ಲ.

ಆದ್ದರಿಂದ ಶತಮಾನ ಕಂಡ ಶಾಲೆಗಳನ್ನು ಗುರುತಿಸಿ, ಅವುಗಳಲ್ಲಿರುವ ಮೂಲಭೂತ ಸಮಸ್ಯೆಗಳು ಮತ್ತು ಅಗತ್ಯತೆಗಳ ಬಗ್ಗೆ ಸರ್ಕಾರಕ್ಕೆ ವರದಿ ಮಾಡಲು ಹಾಗೂ ಹಳೆ ವಿದ್ಯಾರ್ಥಿಗಳಿಂದ ದಾನಿಗಳಿಂದ ಅಗತ್ಯ ಸೌಲಭ್ಯಗಳನ್ನು ಒಗ್ಗೂಡಿಸಲು, ಕಾರ್ಪೋರೇಟ್ ಸಂಸ್ಥೆಗಳ ಸಿ.ಎಸ್.ಆರ್ ಫಂಡ್ ಗಳನ್ನು ಶಾಲಾಭಿವೃದ್ಧಿಗೆ ಬಳಸಲು ಸೂಕ್ತ ಮಾರ್ಗಸೂಚಿಗಳನ್ನು ನಿರ್ಧರಿಸಲು ತಜ್ಞರ ಸಮಿತಿಯನ್ನು ರಚಿಸಿ, ವರದಿ ಪಡೆದು, ಶತಮಾನ ಕಂಡ ಶಾಲೆಗಳನ್ನು ಅಭಿವೃದ್ಧಿಪಡಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಮಂತ್ರಿಗಳ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

**ಶತಮಾನ ಕಂಡ ಸರ್ಕಾರಿ ಶಾಲೆಗಳ ಮಾಹಿತಿ ಕೆಳಕಂಡಂತಿದೆ**

| **ಕ್ರ ಸಂ** | **ಶತಮಾನ ಪೂರೈಸಿರುವ ಕಿರಿಯ/ ಹಿರಿಯ/ ಪ್ರೌಢಶಾಲೆಗಳ ಸಂಖ್ಯೆ** | **ಶಾಲೆಗಳ ಸಂಖ್ಯೆ** |
|---|---|---|
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ | 142 |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ | 3030 |
| 3 | ಪ್ರೌಢ ಶಾಲೆಗಳ ಸಂಖ್ಯೆ | 187 |
| | **ಒಟ್ಟು** | **3359** |

**ಶತಮಾನ ಕಂಡ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ವಿವಿಧ ಯೋಜನೆಗಳಡಿ ಬಿಡುಗಡೆ ಮಾಡಲಾಗಿರುವ ಅನುದಾನದ ವಿವರ ಕೆಳಕಂಡಂತಿದೆ:**

ಶತಮಾನೋತ್ಸವವನ್ನು ಪೂರೈಸಿದ ಶಾಲೆಗಳ ಸಮಗ್ರ ಅಭಿವೃದ್ಧಿಗಾಗಿ ಸಾಧನೆಗಳನ್ನು ಹಿರಿಮೆ ಗರಿಮೆಗಳನ್ನು ಗುರುತಿಸಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು **"ಪಾರಂಪರಿಕ"** ಶಾಲೆಗಳೆಂದು ಗುರುತಿಸಿ ನವೀಕರಣ ಮಾಡಲು ಅನುದಾನ ಬಿಡುಗಡೆ ಮಾಡಲಾಗಿದೆ.

1. 2018-19ನೇ ಸಾಲಿನಲ್ಲಿ ರಾಜ್ಯದಲ್ಲಿ ಶತಮಾನ ಪೂರೈಸಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು "ಪಾರಂಪರಿಕ" ಶಾಲೆಗಳೆಂದು ಗುರುತಿಸಿ ನವೀಕರಿಸಲು 100 ಶಾಲೆಗಳಿಗೆ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.

| **ಕ್ರ ಸಂ** | **ಕಾರ್ಯಕ್ರಮ** | **ಬಿಡುಗಡೆ ಮಾಡಲಾದ ಅನುದಾನ (ರೂ. ಲಕ್ಷಗಳಲ್ಲಿ)** |
|---|---|---|
| 1 | ಸರ್ಕಾರಿ ಪ್ರಾಥಮಿಕ ಶಾಲೆಗಳು- 75 | ಪ್ರತಿ ಶಾಲೆಗೆ ರೂ. 5.00 ಲಕ್ಷಗಳಂತೆ |
| 2 | ಪ್ರೌಢ ಶಾಲೆಗಳು 25 | ಪ್ರತಿ ಶಾಲೆಗೆ ರೂ. 5.00 ಲಕ್ಷಗಳಂತೆ |
| | ಒಟ್ಟು ಅನುದಾನ | 500.00 |

2. 2021-22ನೇ ಸಾಲಿನಲ್ಲಿ ಶತಮಾನ ಪೂರೈಸಿರುವ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು 143 ಸರ್ಕಾರಿ ಶಾಲೆಗಳಿಗೆ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.

| **ಕ್ರ ಸಂ** | **ಕಾರ್ಯಕ್ರಮ** | **ಬಿಡುಗಡೆ ಮಾಡಲಾದ ಅನುದಾನ (ರೂ ಲಕ್ಷಗಳಲ್ಲಿ)** |
|---|---|---|
| 1 | ಪ್ರಾಥಮಿಕ ಶಾಲೆಗಳಿಗೆ | 639. 86 |
| 2 | ಪ್ರೌಢ ಶಾಲೆಗಳಿಗೆ | 1360.14 |

3. ಶತಮಾನ ಕಂಡ ಸರ್ಕಾರಿ ಶಾಲೆಗಳಿಗೆ 2025-26ನೇ ಸಾಲಿನಲ್ಲಿ ಹೊಸ ಕೊಠಡಿ ನಿರ್ಮಾಣ ಮಾಡಲು ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.

| ಕ್ರಮ ಸಂಖ್ಯೆ | ಶಾಲೆಗಳ ಸಂಖ್ಯೆ | ಮಂಜೂರಾದ ಕೊಠಡಿಗಳ ಸಂಖ್ಯೆ | ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1 | 136 | 264 | 4522.30 |

4. ಶತಮಾನ ಕಂಡ ಸರ್ಕಾರಿ ಶಾಲೆಗಳಿಗೆ 2025-26ನೇ ಸಾಲಿನಲ್ಲಿ ಶೌಚಾಲಯ ನಿರ್ಮಾಣ ಕಾಮಗಾರಿಗೆ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.

| ಕ್ರಮ ಸಂಖ್ಯೆ | ಶಾಲೆಗಳ ಸಂಖ್ಯೆ | ಶೌಚಾಲಯಗಳ ಸಂಖ್ಯೆ (ಗಂಡು/ಹೆಣ್ಣು) | ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1 | 216 | 259 | 1036 |

5. ಶತಮಾನ ಕಂಡ ಸರ್ಕಾರಿ ಶಾಲೆಗಳಿಗೆ 2025-26ನೇ ಸಾಲಿನಲ್ಲಿ ಕೊಠಡಿಗಳ ದುರಸ್ತಿಗೆ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.

(ರೂ.ಲಕ್ಷಗಳಲ್ಲಿ)

| ಶಾಲೆಗಳ ಸಂಖ್ಯೆ | ಒಟ್ಟು ಕೊಠಡಿಗಳ ಸಂಖ್ಯೆ | ಉತ್ತಮ ಸ್ಥಿತಿಯಲ್ಲಿರುವ ತರಗತಿ ಕೊಠಡಿಗಳು | ಸಣ್ಣ ರಿಪೇರಿ ಅಗತ್ಯವಿರುವ ತರಗತಿ ಕೊಠಡಿಗಳು | ಸಣ್ಣ ರಿಪೇರಿಗೆ ಅಗತ್ಯವಿರುವ ಒಟ್ಟು ಮೊತ್ತ | ಪ್ರಮುಖ ರಿಪೇರಿಗೆ ಅಗತ್ಯವಿರುವ ತರಗತಿ ಕೊಠಡಿಗಳು | ಪ್ರಮುಖ ರಿಪೇರಿಗೆ ಅಗತ್ಯವಿರುವ ಒಟ್ಟು ಮೊತ್ತ | ಒಟ್ಟು ಕೊಠಡಿಗಳು | ಬಿಡುಗಡೆಯಾದ ಒಟ್ಟು ಮೊತ್ತ |
|---|---|---|---|---|---|---|---|---|
| 576 | 7037 | 4623 | 868 | 850.85 | 691 | 1131.32 | 1559 | 1982.17 |

ಸರ್ಕಾರದ ವತಿಯಿಂದ ರಾಜ್ಯದ ಐತಿಹಾಸಿಕ ಹಾಗೂ ಶತಮಾನ ಕಂಡ ಪಾರಂಪರಿಕ ಸರ್ಕಾರಿ ಶಾಲೆಗಳ ಸಂರಕ್ಷಣೆ, ಮೂಲ ಸೌಲಭ್ಯ ಅಭಿವೃದ್ಧಿ ಮತ್ತು ಶೈಕ್ಷಣಿಕ ಸಬಲೀಕರಣಕ್ಕಾಗಿ ಹಲವು ಪ್ರಮುಖ ಕ್ರಮಗಳನ್ನು ಕೈಗೊಂಡಿದೆ. ರಾಜ್ಯದಲ್ಲಿ ನೂರು ವರ್ಷಗಳನ್ನು ಪೂರೈಸಿರುವ ಸಾವಿರಾರು ಸರ್ಕಾರಿ ಶಾಲೆಗಳ ಸಮಗ್ರ ಚಿತ್ರಣ ಮತ್ತು ಅವುಗಳ ಸಬಲೀಕರಣಕ್ಕಾಗಿ ಸರ್ಕಾರದ ವತಿಯಿಂದ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ.

**1.ಶತಮಾನ ಕಂಡ ಶಾಲೆಗಳ ಸಮೀಕ್ಷೆ ಮತ್ತು ಅಂಕಿ-ಅಂಶ**

- ರಾಜ್ಯದಲ್ಲಿ ನೂರು ವರ್ಷಗಳಿಗೂ ಅಧಿಕ ಇತಿಹಾಸಹೊಂದಿರುವ ಸುಮಾರು 3,139 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಗುರುತಿಸಲಾಗಿದೆ.
- ಬೆಳಗಾವಿ ವಿಭಾಗಕ್ಕೆ ಸಂಬಂಧಿಸಿದಂತೆ ಶತಮಾನ ಕಂಡ ಶಾಲೆಗಳು ಬಾಗಲಕೋಟೆ-198, ಬೆಳಗಾವಿ-216, ಗದಗ-214, ಚಿಕ್ಕೋಡಿ-210. ಧಾರವಾಡ-212, ಹಾವೇರಿ-208, ಶಿರಸಿ-79, ಕಾರವಾರ-151 ಮತ್ತು ವಿಜಯಪುರ-157 ಒಟ್ಟು 1645 ಶತಮಾನ ಕಂಡ ಶಾಲೆಗಳು ಇರುತ್ತವೆ.

**2. ಮೂಲ ಸೌಲಭ್ಯ ಅಭಿವೃದ್ಧಿ ಮತ್ತು ಅನುದಾನ ಬಿಡುಗಡೆ**

- ಪಾರಂಪರಿಕ ಹಾಗೂ ಶತಮಾನ ಕಂಡ ಶಾಲೆಗಳ ಪುರಾತನ ಕಟ್ಟಡಗಳ ದುರಸ್ತಿ, ಸೋರಿಕೆ ತಡೆಗಟ್ಟುವಿಕೆ, ಕಾಂಪೌಂಡ್ ನಿರ್ಮಾಣ, ಶೌಚಾಲಯ, ಕುಡಿಯುವ ನೀರಿನ ಸೌಲಭ್ಯ ಹಾಗೂ ಮೈದಾನಗಳ ಅಭಿವೃದ್ಧಿಗಾಗಿ ಸರ್ಕಾರವು ಕಾಲಕಾಲಕ್ಕೆ ಅನುದಾನ ಬಿಡುಗಡೆ ಮಾಡಿದೆ.
- ಈ ಹಿಂದೆ ಶತಮಾನದ ಶಾಲೆಗಳನ್ನು ಆಯ್ಕೆ ಮಾಡಿ ಅಭಿವೃದ್ಧಿ ಪಡಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ.
- ಲೋಕೋಪಯೋಗಿ ಇಲಾಖೆ ಹಾಗೂ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗಗಳ ಮೂಲಕ ಕಾಮಗಾರಿಗಳನ್ನು ಪಾರದರ್ಶಕವಾಗಿ ಕೈಗೊಳ್ಳಲು ನಿರ್ದೇಶಿಸಲಾಗಿದೆ.

3. **ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ (KDA) ವಿಶೇಷ ಶಿಫಾರಸ್ಸುಗಳು ಮತ್ತು ವರದಿ**

- ಶತಮಾನ ಕಂಡ ಶಾಲೆಗಳ ರಕ್ಷಣೆ ಹಾಗೂ ಸಬಲೀಕರಣಕ್ಕಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಇಲಾಖೆಗೆ ಸಮಗ್ರ ವರದಿಯನ್ನು ಸಲ್ಲಿಸಿದೆ.
- ಪಾರಂಪರಿಕ ಶಾಲೆಗಳ ಘೋಷಣೆ: ರಾಜ್ಯದ ಪ್ರತಿ ಜಿಲ್ಲೆಗೊಂದರಂತೆ (ಕನಿಷ್ಠ 31 ಶಾಲೆಗಳು) ಸ್ವಾತಂತ್ರ್ಯ ಹೋರಾಟಗಾರರು, ಮಹನೀಯರು ಹಾಗೂ ಗಣ್ಯರು ಓದಿದ ಶಾಲೆಗಳನ್ನು 'ಪಾರಂಪರಿಕ ಶಾಲೆಗಳಾಗಿ' (Heritage Schools) ರೂಪಿಸಿ, ಅಲ್ಲಿ ಆಮಹನೀಯರ ಸಾಧನೆ ಬಿಂಬಿಸುವ ಸಣ್ಣ ವಸ್ತು ಸಂಗ್ರಹಾಲಯ (Museum) ಸ್ಥಾಪಿಸಲು ಶಿಫಾರಸು ಮಾಡಲಾಗಿದೆ.
- ಪ್ರತ್ಯೇಕ ಕೋಶ (Cell): ಇಲಾಖೆಯಲ್ಲಿ ಶತಮಾನ ಕಂಡ ಶಾಲೆಗಳ ನಿರ್ವಹಣೆ ಮತ್ತು ಮೇಲ್ವಿಚಾರಣೆಗಾಗಿ ಪ್ರತ್ಯೇಕ ಕೋಶವನ್ನು ಸ್ಥಾಪಿಸುವುದು ಹಾಗೂ ಜಿಲ್ಲಾ ಮಟ್ಟದಲ್ಲಿ ಸಮಗ್ರ ಅಧ್ಯಯನ ನಡೆಸುವುದು.
- ಶಾಲಾ ಪರಂಪರೆ ದಾಖಲಾತಿ: ಪ್ರತಿ ತಾಲ್ಲೂಕಿನಲ್ಲಿ ಒಂದು ಶತಮಾನದ ಶಾಲೆಯನ್ನು ಆಪ್ರದೇಶದ ಇತಿಹಾಸ, ಭೌಗೋಳಿ ಕತೆ ಮತ್ತು ಪರಿಸರ ಅಧ್ಯಯನದ ಕಲಿಕಾ ಹಾಗೂ ಪ್ರದರ್ಶನ ಕೇಂದ್ರವಾಗಿ ಅಭಿವೃದ್ಧಿ ಪಡಿಸುವುದು.
- ಅಂಗ ಸಂಸ್ಥೆಗಳು ಮತ್ತು ಹಳೆ ವಿದ್ಯಾರ್ಥಿ ಸಂಘಗಳಸ ಕ್ರಿಯಗೊಳಿಸುವಿಕೆ: ಶತಮಾನ ಕಂಡ ಶಾಲೆಗಳಲ್ಲಿ ಹಳೆ ವಿದ್ಯಾರ್ಥಿಗಳ ಸಂಘಗಳನ್ನು (Alumni Associations) ಸಕ್ರಿಯಗೊಳಿಸಿ, ಸಮುದಾಯದ ಸಹಭಾಗಿತ್ವದೊಂದಿಗೆ ಶಾಲೆಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ.

4. **ಆಧುನಿಕ ಸೌಲಭ್ಯಗಳ ಜೋಡಣೆ (KPS ಹಾಗೂ ಡಿಜಿಟಲ್ ಸ್ಪರ್ಶ)**

- ಅನೇಕ ಶತಮಾನದ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕುಸಿಯುತ್ತಿರುವುದನ್ನು ತಡೆಯಲು ಮತ್ತು ಗುಣಮಟ್ಟದ ಶಿಕ್ಷಣ ನೀಡಲು ಇವುಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳ (KPS) ಮಾದರಿಯಲ್ಲಿ ಉನ್ನತೀಕರಿಸಲಾಗಿದೆ. ದ್ವಿಭಾಷಾ (Bilingual) ಶಿಕ್ಷಣ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ.
- **ಈ ಶಾಲೆಗಳಿಗೆ** ಸ್ಮಾರ್ಟ್ ತಗತಿಗಳು, ಪ್ರಯೋಗಾಲಯಗಳು ಕಂಪ್ಯೂಟರ್, ಮೂಲಭೂತ ಸೌಕರ್ಯಗಳನ್ನು ಮತ್ತು ಶಿಕ್ಷಕರನ್ನು ಹಾಗೂ ಅಗತ್ಯ ಮಾನವ ಸಂಪನ್ಮೂಲವನ್ನು ಒದಗಿಸುವ ಮೂಲಕ ಆಧುನಿಕ ತಂತ್ರಜ್ಞಾನ ಆಧಾರಿತ ಕಲಿಕೆಗೆ ಒತ್ತು ನೀಡಲಾಗುತ್ತಿದೆ.

**2026-27ನೇ ಸಾಲಿನಲ್ಲಿ ಸರ್ಕಾರಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರಾಜ್ಯ ವಲಯ ಯೋಜನೆಯಡಿ ಒದಗಿಸಲಾಗಿರುವ ಅನುದಾನದ ವಿವರ:**

- 2026-27ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕಾಗಿ ರೂ.450.00 ಕೋಟಿ ಮತ್ತು ಶೌಚಾಲಯಗಳ ನಿರ್ಮಾಣಕ್ಕಾಗಿ ರೂ.75.00 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.
- 2026-27ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಿಗೆ ಪೀಠೋಪಕರಣಗಳನ್ನು ಒದಗಿಸಲು ರೂ.25.00 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.

- 2026-27ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ನಿರ್ಮಾಣ ಹಾಗೂ ಶೌಚಾಲಯಗಳ ನಿರ್ಮಾಣಕ್ಕಾಗಿ ರೂ.115.00 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.
- ಈಗಾಗಲೇ ಅಸ್ತಿತ್ವದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರೂ.20.00 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.
- ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲ ಯೋಜನೆಯಡಿ ಉನ್ನತೀಕರಿಸಲಾಗುತ್ತಿರುವ 500 ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಉನ್ನತೀಕರಿಸಲು ರೂ.100.00 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.

2026-27ನೇ ಸಾಲಿನಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ 59 ಸರ್ಕಾರಿ ಶಾಲೆಗಳ ದುರಸ್ತಿಗಾಗಿ ರೂ.1003.02 ಲಕ್ಷಗಳು ಹಾಗೂ 55 ಹೊಸ ತರಗತಿ ಕೊಠಡಿಗಳ ನಿರ್ಮಾಣಕ್ಕಾಗಿ ರೂ.12107.08 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ (ಶತಮಾನ ಕಂಡ ಶಾಲೆಗಳನ್ನು ಒಳಗೊಂಡಂತೆ ) ಮೂಲಭೂತ ಸೌಕರ್ಯ / ಸೌಲಭ್ಯಗಳ ಕೊರತೆಯನ್ನು ಗುರುತಿಸಿ ನಿವಾರಿಸುವುದು ನಿರಂತರ ಪ್ರಕ್ರಿಯೆಯಾಗಿದ್ದು, ಈ ಸಂಬಂಧ ಪ್ರತಿ ವರ್ಷ ರಾಜ್ಯ ಸರ್ಕಾರದಿಂದ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಮತ್ತು ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳಡಿ ಮಂಜೂರಾಗುವ ಅನುದಾನದಲ್ಲಿ ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಮೂಲಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಆದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ನೀಡಿ, ಮೂಲಸೌಲಭ್ಯಗಳನ್ನು ಒದಗಿಸಿ, ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗುತ್ತಿದೆ.

ರಾಜ್ಯ ವಲಯದ ಅನುದಾನದಡಿಯಲ್ಲಿನ ಈ ಕೆಳಕಂಡ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

- ನೂತನ ಶಾಲಾ ಕೊಠಡಿಗಳ ನಿರ್ಮಾಣ.
- ಶಾಲಾ ಕೊಠಡಿಗಳ ದುರಸ್ತಿ.
- ಶಾಲಾ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆ.
- ಶಾಲೆಗಳಿಗೆ ಪೀಠೋಪಕರಣಗಳ ಸರಬರಾಜು.

ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಈ ಕೆಳಕಂಡ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

- ನೂತನ ಶಾಲಾ ಕೊಠಡಿಗಳ ನಿರ್ಮಾಣ.
- ಶಾಲಾ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆ.
- ಶಾಲೆಗಳಿಗೆ ಪೀಠೋಪಕರಣಗಳ ಸರಬರಾಜು.
- ಕುಡಿಯುವ ನೀರು.

CEPMIZ ಯೋಜನೆಯಡಿ ಗಣಿಬಾಧಿತ ಜಿಲ್ಲೆಗಳಲ್ಲಿನ ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

ಕಲ್ಯಾಣ ಕರ್ನಾಟಕ ಭಾಗದ 07 ಜಿಲ್ಲೆಗಳ ವ್ಯಾಪ್ತಿಯ ಸರ್ಕಾರಿ ಶಾಲೆಗಳಿಗೆ ಅಗತ್ಯತೆ ಮತ್ತು ಅರ್ಹತೆಯಂತೆ ಕೆ.ಕೆ.ಆರ್.ಡಿ.ಬಿ. ಅನುದಾನದಿಂದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (CCSR ) ಕಾರ್ಯಕ್ರಮದಡಿ ಅನೇಕ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲು ಅವಕಾಶ ಕಲ್ಪಿಸಲಾಗಿದೆ.

**ಇಪಿ 253 ಯೋಸಕ 2026**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**